ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ಬಸವರಾಜ ಹೊರಟ್ಟಿ ಸಮಿತಿ ವರದಿ ಜಾರಿ ಕುರಿತು

ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ)

ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ)

ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)

1 (33+25+55) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಹುದಿನಗಳ ಬೇಡಿಕೆಯಾದ ಅನುದಾನಿತ ಶಾಲಾ ಶಿಕ್ಷಕರಿಗೆ ಮತ್ತು ಉಪನ್ಯಾಸಕರಿಗೆ ಕಾಲ್ಪನಿಕ ವೇತನ ಬಡ್ತಿ ಮಂಜೂರಿಗೆ ಸಂಬಂಧಿಸಿದಂತೆ ವರದಿ ನೀಡಲು ಶ್ರೀ ಬಸವರಾಜ ಹೊರಟ್ಟಿ ಅವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ಯಾವಾಗ ರಚಿಸಲಾಯಿತು ; ಯಾವ ದಿನಾಂಕದಂದು ವರದಿಯನ್ನು ಸಲ್ಲಿಸಿದೆ; ಸಲ್ಲಿಸಿದ್ದಲ್ಲಿ, ವರದಿಯಲ್ಲಿನ ಶಿಫಾರಸ್ಸುಗಳು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸದರಿ ಶಿಫಾರಸ್ಸುಗಳನ್ನು ಅನುಷ್ಠಾನಕ್ಕೆ ತರುವ ಕುರಿತು ಸರ್ಕಾರದ ನಿಲುವೇನು ; ವಿಳಂಬಕ್ಕೆ ಕಾರಣಗಳ ಸಹಿತ ವಿವರ ನೀಡುವುದು ;

(ಇ) ರಾಜ್ಯದ ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ಕಾಲ್ಪನಿಕ ವೇತನ ಬಡ್ತಿ ಪಡೆಯಲು ಅರ್ಹರಾಗಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಈ) ಈ ಸಿಬ್ಬಂದಿ ವರ್ಗದವರಿಗೆ ಕಾಲ್ಪನಿಕ ವೇತನ ಬಡ್ತಿ ನೀಡಲು ಬೇಕಾಗುವ ಹಣವೆಷ್ಟು ; ಈ ಬಗ್ಗೆ ಸರ್ಕಾರ ನಿರ್ಧಾರ ಕೈಗೊಂಡಿದೆಯೇ ;

(ಉ) ಯಾವ ಕಾಲಮಿತಿಯಲ್ಲಿ ಕಾಲ್ಪನಿಕ ವೇತನ ಬಡ್ತಿಯನ್ನು ನೀಡಲಾಗುತ್ತದೆ ? (ವಿವರ ನೀಡುವುದು)